# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 805 |
| ಮಾನ್ಯ ವಿಧಾನ ಪರಿಷತ್ತು ಸದಸ್ಯರ ಹೆಸರು | : | ಶ್ರೀ ಶಶೀಲ್ ಜಿ.ನಮೋಶಿ |
| ಉತ್ತರಿಸಬೇಕಾದ ದಿನಾಂಕ | : | 24/02/2023 |
| ಉತ್ತರಿಸಬೇಕಾದವರು | : | ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

| ಕ್ರ.ಸಂ | ವಿಷಯ | ಉತ್ತರ |
|---|---|---|
| ಅ) | 2017-18 ನೇ ಸಾಲಿನ ಆಯವ್ಯಯದ ಘೋಷಣೆಯಂತೆ 30 ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳನ್ನು ಉನ್ನತೀಕರಿಸಿ ಪದವಿ ಪೂರ್ವ ತರಗತಿಗಳನ್ನು ಪ್ರಾರಂಭಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | 2017-18 ನೇ ಸಾಲಿನ ಆಯವ್ಯಯದ ಘೋಷಣೆಯಂತೆ 6 ರಿಂದ 10 ನೇ ತರಗತಿಯವರೆಗೆ ಕಾರ್ಯನಿರ್ವಹಿಸುತ್ತಿದ್ದ 30 ವಸತಿ ಶಾಲೆಗಳನ್ನು ಸರ್ಕಾರದ ಆದೇಶ ಸಂಖ್ಯೆ: ಸಕಇ 154 ಮೊದೇಶಾ 2017 (ಭಾಗ) ದಿ:17.05.2017 ರಲ್ಲಿ 6 ರಿಂದ 12 ನೇ ತರಗತಿಯವರೆಗೆ ಉನ್ನತೀಕರಿಸಿ ಆದೇಶಿಸಲಾಗಿರುತ್ತದೆ. |
| ಆ) | ಹಾಗಿದ್ದಲ್ಲಿ ಈ 30 ವಸತಿ ಪದವಿ-ಪೂರ್ವ ತರಗತಿಗಳಿಗೆ ಬೋಧನೆ ಮಾಡಲು ಖಾಯಂ ಉಪನ್ಯಾಸಕರ ಹುದ್ದೆಗಳನ್ನು ಮಂಜೂರು ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಉನ್ನತೀಕರಿಸಿದ ವಸತಿ ಶಾಲೆಗಳಿಗೆ ಬೋಧಕ/ಬೋಧಕೇತರ ಹುದ್ದೆಗಳನ್ನು ಮಂಜೂರು ಮಾಡಲು 30 ವಸತಿ ಶಾಲೆಗಳ ಪೈಕಿ 10 ವಸತಿ ಶಾಲೆಗಳಿಗೆ ಸರ್ಕಾರದ ಆದೇಶ ಸಂಖ್ಯೆ: ಸಕಇ 154 ಮೊದೇಶಾ 2017 ದಿ: 30.06.2022 ರಲ್ಲಿ ಮೊದಲ ಶೈಕ್ಷಣಿಕ ವರ್ಷಕ್ಕೆ ಸೀಮಿತ ಗೊಳಿಸಿ ಪ್ರತಿ ಶಾಲೆಗೆ 09 ಹುದ್ದೆಗಳನ್ನು ಮಂಜೂರು ಮಾಡಲಾಗಿರುತ್ತದೆ.<br><br>ಉಳಿದ 20 ಉನ್ನತೀಕರಿಸಿದ ವಸತಿ ಶಾಲೆಗಳಿಗೆ ಹುದ್ದೆಗಳನ್ನು ಸೃಜಿಸುವ ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ. |
| ಇ) | ಖಾಯಂ ಬೋಧಕ ಸಿಬ್ಬಂದಿಗಳನ್ನು ನೇಮಕ ಮಾಡದಿರುವುದರಿಂದ ಶಿಕ್ಷಣ ಗುಣಮಟ್ಟ ಕುಸಿಯುದಿಲ್ಲವೆ? | 30 ಉನ್ನತೀಕರಿಸಿದ ವಸತಿ ಶಾಲೆಗಳಿಗೆ ಪೂರ್ಣ ಪ್ರಮಾಣದ ಹುದ್ದೆಗಳು ಮಂಜೂರಾದ ನಂತರ ನಿಯಮಾನುಸಾರ ನೇಮಕಾತಿಗೆ ಕ್ರಮವಹಿಸಲಾಗುವುದು. |

ಸಕಇ 30 ಎಂಡಿಎಸ್ 2023

(ಕೋಟಾ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಹಾಗೂ ಹಿಂದುಳಿದ
ವರ್ಗಗಳ ಕಲ್ಯಾಣ ಸಚಿವರು.